ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 2041
2. ಸದಸ್ಯರ ಹೆಸರು : ಶ್ರೀ ಎಂ.ಎಲ್.ಅನಿಲ್ ಕುಮಾರ್
3. ಉತ್ತರಿಸಬೇಕಾದ ದಿನಾಂಕ: : 17-03-2022
4. ಉತ್ತರಿಸುವ ಸಚಿವರು : ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಸಣ್ಣ ನೀರಾವರಿ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
ಅ	2018-19, 2019-20, 2021-22ನೇ ಸಾಲಿನ ಆಯವ್ಯಯದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಗೆ ಸಣ್ಣ ನೀರಾವರಿ ಇಲಾಖೆಗೆ ಸಂಬಂಧಪಟ್ಟಂತೆ ಯಾವ ಯಾವ ಯೋಜನೆಗಳನ್ನು ಘೋಷಣೆ ಮಾಡಲಾಗಿದೆ; (ವಿವರ ನೀಡುವುದು)	2018-19 ಮತ್ತು 2019-20 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಗೆ ಸಂಬಂಧಪಟ್ಟಂತೆ ಯಾವುದೇ ಯೋಜನೆಗಳನ್ನು ಘೋಷಣೆ ಮಾಡಿರುವುದಿಲ್ಲ. 2021-22 ನೇ ಸಾಲಿನ ಆಯವ್ಯಯ ಭಾಷಣದಲ್ಲಿ "ಬೆಂಗಳೂರು ನಗರ ಮತ್ತು ಗ್ರಾಮಾಂತರ, ತುಮಕೂರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳ 234 ಕೆರೆಗಳಿಗೆ ಬೆಂಗಳೂರು ನಗರದ ವೃಷಭಾವತಿ ಕಣಿವೆಯಿಂದ ದ್ವಿತೀಯ ಹಂತಕ್ಕೆ ಸಂಸ್ಕರಿಸಿದ 308 ಎಂ.ಎಲ್.ಡಿ. ನೀರು ತುಂಬಿಸುವ ಯೋಜನೆಗೆ" ರೂ. 500.00 ಕೋಟಿ ಅನುದಾನವನ್ನು ಘೋಷಣೆ ಮಾಡಲಾಗಿರುತ್ತದೆ.
ಆ	ಈ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿರುವ ಯೋಜನೆಗಳನ್ನು ಅನುಷ್ಠಾನ ಮಾಡಲಾಗಿದೆಯೇ; ಮಾಡದಿದ್ದಲ್ಲಿ. ಕಾರಣಗಳೇನು;	ಆಯವ್ಯಯದಲ್ಲಿ ಘೋಷಿಸಿರುವಂತೆ ಬೆಂಗಳೂರು ನಗರದ ವೃಷಭಾವತಿ ವ್ಯಾಲಿಯ ನಾಯಂಡಹಳ್ಳಿ ಎಸ್.ಟಿ.ಪಿ ಇಂದ ದ್ವಿತೀಯ ಹಂತದಲ್ಲಿ ಸಂಸ್ಕರಿಸಿದ ನೀರನ್ನು ಮೊದಲನೇ ಹಂತದಲ್ಲಿ ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ತುಮಕೂರು ಜಿಲ್ಲೆಯ ಒಟ್ಟು 82 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ರೂ 865.00 ಕೋಟಿ ಅಂದಾಜು ಮೊತ್ತದ ಕಾಮಗಾರಿಗೆ ಅನುಮೋದನೆ ನೀಡಲಾಗಿದೆ.
ಇ	ಆಯವ್ಯಯದಲ್ಲಿ ಘೋಷಣೆಯಾಗಿ ಸದನದಲ್ಲಿ ಅಂಗೀಕಾರವಾಗಿ ಹಣವನ್ನು ಮೀಸಲಿಟ್ಟ ನಂತರ ಬೇರೆ ಉದ್ದೇಶಕ್ಕೆ ಹಣವನ್ನು ಬಳಕೆ ಮಾಡಲಾಗಿದೆಯೇ,;	ಆಯವ್ಯಯದಲ್ಲಿ ಘೋಷಣೆಯಾಗಿ ಅಂಗೀಕಾರವಾದ ಹಣವನ್ನು ಮೀಸಲಿಟ್ಟ ಕಾಮಗಾರಿಗೆ ಬಳಸಿಕೊಳ್ಳಲಾಗುವುದು. ಬೇರೆ ಯಾವುದೇ ಉದ್ದೇಶಕ್ಕೆ ಹಣವನ್ನು ಬಳಕೆ ಮಾಡಿರುವುದಿಲ್ಲ.
ಈ	ಚಿಕ್ಕಬಳ್ಳಾಪುರ ಜಿಲ್ಲೆಯ ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿಗೆ ಆಯವ್ಯಯದಲ್ಲಿ ಮೀಸಲಿಟ್ಟ ಹಣ ಪ್ರಸ್ತುತ ಆರ್ಥಿಕ ಇಲಾಖೆಯಲ್ಲಿ ಇದೆಯೇ; ಬೇರೆ ಉದ್ದೇಶಕ್ಕೆ ಬಳಸಿಕೊಳ್ಳಲಾಗಿದೆಯೇ, ಬೇರೆ ಉದ್ದೇಶಕ್ಕೆ ಬಳಸಿಕೊಳ್ಳಲು ಸದನದಲ್ಲಿ ಒಪ್ಪಿಗೆ ಪಡೆಯಲಾಗಿದೆಯೇ; (ವಿವರ ನೀಡುವುದು)	ಪ್ರಸ್ತುತ ಆರ್ಥಿಕ ವರ್ಷದಲ್ಲಿ ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿಗೆ ಆಯವ್ಯಯದಲ್ಲಿ ಯಾವುದೇ ಯೋಜನೆಗಳು ಘೋಷಣೆಯಾಗಿರುವುದಿಲ್ಲ.

ಉ	ಸದರಿ ಅನುದಾನವು ಆರ್ಥಿಕ ಇಲಾಖೆಯಲ್ಲಿ ಇದ್ದಲ್ಲಿ ಆ ಅನುದಾನದಲ್ಲಿ ಪ್ರಸ್ತುತ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳದೇ ಇರಲು ಕಾರಣಗಳೇನು; ಪ್ರಸ್ತುತ ಸದರಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದೇ? (ವಿವರ ನೀಡುವುದು)	ಅನ್ವಯಿಸುವುದಿಲ್ಲ.

ಸಂಖ್ಯೆ: **MID 50 LCQ 2022.**

(ಜೆ.ಸಿ.ಮಾಧುಸ್ವಾಮಿ)
ಕಾನೂನು, ಸಂಸದೀಯ ವ್ಯವಹಾರಗಳು
ಹಾಗೂ ಶಾಸನ ರಚನೆ ಮತ್ತು ಸಣ್ಣ ನೀರಾವರಿ ಸಚಿವರು.